



ಅರುಣ ಪಿ. ಭಟ್ಟ

## ವಾರಭವಿಷ್ಯ: 30.9.2021 6.10.2021ರವರೆಗೆ




ನೀವು ಕೈಗೊಳ್ಳುವ ಕೆಲಸದಿಂದ ವಿಶ್ವಾಸಾರ್ಹತೆ ಹೆಚ್ಚಾಗುತ್ತದೆ. ಕೆಲವರು ನಿಮ್ಮನ್ನು ಅವಮಾನಕ್ಕೆ ಗುರಿ ಮಾಡಲಿದ್ದಾರೆ. ವಾರದ ಅಂತ್ಯಕ್ಕೆ ಸಂತೋಷವಾಗಿ ಸಮಯ ಕಳೆಯಲಿದ್ದೀರಿ. ನಿಮ್ಮ ಕೆಲಸದ ಜತೆಜತೆಗೆ ಆಹಾರ ಪಥ್ಯದ ಬಗ್ಗೆಯೂ ಕಾಳಜಿ ತೆಗೆದುಕೊಳ್ಳುತ್ತೀರಿ. ಸಮಯವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವಲ್ಲಿ ಯಶಸ್ಸು ಕಾಣುತ್ತೀರಿ. ಶುಭದಿನ 01. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.

ನಿಮ್ಮ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುವವರ ಸಂಖ್ಯೆ ಹೆಚ್ಚಾಗುತ್ತದೆ. ವಾರದ ದ್ವಿತೀಯಾರ್ಧದಲ್ಲಿ ಕೆಲಸ ಕಾರ್ಯಗಳಲ್ಲಿ ತೊಂದರೆ ಎದುರಾಗುತ್ತದೆ. ತಾಂತ್ರಿಕ ಸಲಕರಣೆ, ಕೆಲಸಗಾರರು ಸಮಯಕ್ಕೆ ಸಿಗದಿರುವುದು ಇಂಥ ಕಾರಣಗಳಿಗೆ ತಡ ತೊಂದರೆ ಆಗುತ್ತದೆ. ತೊಂದರೆಗಳನ್ನು ತಡೆಯಲು ನೀವು ಭಾರೀ ಶ್ರಮ ಹಾಕುತ್ತೀರಿ. ಕೋರ್ಟ್ ಕೇಸುಗಳಲ್ಲಿ ಸಮಸ್ಯೆಗಳನ್ನು ಎದುರಿಸುತ್ತೀರಿ. ಶುಭದಿನ 04. ಕಾಲಭೈರವನ ಸೇವೆ ಮಾಡಿರಿ.







ವಾರದ ಆರಂಭದಿಂದಲೇ ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕಾಗುತ್ತದೆ. ಸಂಬಂಧಿಕರ ಜತೆಗೆ ಉತ್ತಮ ಸಮಯ ಕಳೆಯುವ ಸಾಧ್ಯತೆ ಇದೆ. ಎಚ್ಚರಿಕೆಯಿಂದ ವ್ಯವಹರಿಸಿ. ಈ ವಾರ ಸ್ವಲ್ಪ ಹೆಚ್ಚೇ ಹಣ ಖರ್ಚು ಮಾಡಬೇಕಾಗುತ್ತದೆ. ತಲೆ ನೋವು ಹಲ್ಲು ನೋವು ಕಾಡಬಹುದು. ವ್ಯಾಪಾರದಲ್ಲಿ ನಿಮಗೆ ಅನುಕೂಲಕರ ಸನ್ನಿವೇಶ ಇರುತ್ತದೆ. ಶುಭದಿನ 02. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.

ವ್ಯಾಪಾರದಲ್ಲಿ ಹೊಸ ಉತ್ಪನ್ನಗಳನ್ನು ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ಸಕಾಲ ಆದಾಯವು ಉತ್ತಮವಾಗಿರುತ್ತದೆ. ವಿವಾಹ ವಯಸ್ಕ ಮಗ ಅಥವಾ ಮಗಳು ಇದ್ದಲ್ಲಿ ಅವರ ಮದುವೆ ವಿಚಾರವಾಗಿ ಸಂಬಂಧಿಕರ ಜತೆಗೆ ಮಾತುಕತೆ ನಡೆಸಲಿದ್ದೀರಿ.ಈ ವಾರ ಹಲವು ತುರ್ತು ಕೆಲಸಗಳನ್ನು ಪೂರ್ಣಗೊಳಿಸುವಲ್ಲಿ ನಿಮ್ಮ ಗಮನ ಕೇಂದ್ರೀಕೃತವಾಗಿರುತ್ತದೆ. ಶುಭದಿನ 04. ಶಿವಕವಚ ಪಠಣ ಮಾಡಿರಿ.







ವಾರದ ಶುರುವಿನಿಂದಲೇ ಕೆಲಸಕ್ಕೆ ವೇಗ ನೀಡಲು ಬಹಳ ಪ್ರಯತ್ನ ಮಾಡುತ್ತೀರಿ. ನೀವು ಹಾಕಿದ ಶ್ರಮಕ್ಕೆ ತಕ್ಕ ಪ್ರತಿಫಲವನ್ನು ಪಡೆಯಲಿದ್ದೀರಿ. ಇತರರ ಸಮಸ್ಯೆಗಳನ್ನು ಬಗೆಹರಿಸಲು ಹೊಸ ದಾರಿಗಳನ್ನು ಸೂಚಿಸುತ್ತೀರಿ. ನೀವು ಕೆಲಸ ಮಾಡುವ ರೀತಿಗೆ ಸಹೋದ್ಯೋಗಿಗಳು, ಮೇಲಧಿಕಾರಿಗಳ ಜವಾಬ್ದಾರಿ ಎಚ್ಚರಗೊಳ್ಳುತ್ತದೆ. ಆರೋಗ್ಯವು ಉತ್ತಮವಾಗಿ ಇರುತ್ತದೆ. ಶುಭದಿನ 01. ಲಿಂಗಾಷ್ಟಕ ಪಠಣ ಮಾಡಿರಿ.

ನಿಮ್ಮ ವಿವೇಚನೆಯನ್ನು ಸಮರ್ಥವಾಗಿ ಬಳಸುವ ಮೂಲಕ ವ್ಯಾಪಾರವನ್ನು ಇನ್ನಷ್ಟು ಉತ್ತಮವಾಗಿ ಮಾಡುತ್ತೀರಿ. ಇನ್ನು ಈ ಅವಧಿಯಲ್ಲಿ ಕುಟುಂಬ ಸದಸ್ಯರ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಉದ್ಯೋಗಸ್ಥರಿಗೆ ಉದ್ಯೋಗ ಸ್ಥಳದಲ್ಲಿ ಸಹೋದ್ಯೋಗಿಗಳ ಜತೆಗೆ ಉದ್ವಿಗ್ನವಾದ ಸನ್ನಿವೇಶ ಎದುರಾಗುತ್ತದೆ. ಈ ಅವಧಿಯಲ್ಲಿ ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಶುಭದಿನ 30. ಗಣಪತಿಗೆ ದೂರ್ವಾರ್ಚನೆ ಮಾಡಿರಿ.







ಈ ವಾರ ಕೌಟುಂಬಿಕ ಹಾಗೂ ವೈಯಕ್ತಿಕ ಸಮಸ್ಯೆಗಳ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಿ. ಸಣ್ಣ ವಿಚಾರ ಕೂಡ ದೊಡ್ಡ ಬಿಕ್ಕಟ್ಟಾಗಿ ಎದ್ದು ನಿಲ್ಲುವ ಸಾಧ್ಯತೆ ಇದೆ. ಕೌಟುಂಬಿಕ ವಿಚಾರದಲ್ಲಿ ಕ್ರಮೇಣವಾಗಿ ಪ್ರಗತಿ ಕಾಣುತ್ತದೆ. ವಾರದ ದ್ವಿತೀಯಾರ್ಧದಲ್ಲಿ ದಾನ ಧರ್ಮ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುತ್ತೀರಿ. ನೌಕರಸ್ಥರಿಗೆ ಬಡ್ತಿ ಅಥವಾ ವರ್ಗಾವಣೆಯ ಸಾಧ್ಯತೆ. ಶುಭದಿನ 03. ಸೌಂದರ್ಯ ಲಹರಿ ಪಠಿಸಿರಿ.

ವಾರದ ಮೊದಲ ಭಾಗದಿಂದಲೇ ಆರೋಗ್ಯವಾಗಿ ಇರುತ್ತೀರಿ. ಬಹಳ ಮುಖ್ಯವಾದ ವ್ಯವಹಾರವೊಂದರ ಭಾಗೀದಾರರಾಗಿ ಅಥವಾ ನೀವೇ ಮುಖ್ಯ ಸ್ಥಾನಕ್ಕೆ ನೇಮಕ ಸಾಧ್ಯತೆ ಇದೆ. ರಾಜಕಾರಣಿಗಳಿಗೆ ಹೆಚ್ಚಿನ ಜವಾಬ್ದಾರಿ ವಹಿಸಿಕೊಳ್ಳಬೇಕಾಗುತ್ತದೆ. ಖರೀದಿ ಮಾಡಬೇಕು ಎಂದು ನೀವು ಲೆಕ್ಕ ಹಾಕಿಕೊಂಡಿದ್ದ ಭೂಮಿಯೊಂದರ ಪರಿಶೀಲನೆ ನಡೆಸುವ ಸಾಧ್ಯತೆ ಇದೆ. ಶುಭದಿನ 02. ಲಕ್ಷ್ಮೀ ನಾರಾಯಣ ಹೃದಯ ಪಠಿಸಿರಿ.







ವಾರದ ಶುರುವಿನಿಂದಲೇ ವ್ಯಾಪಾರಸ್ಥರು ಉದ್ಯೋಗಸ್ಥರು ತಮ್ಮ ವ್ಯಾಪಾರ ಉದ್ಯಮದ ಪ್ರಗತಿಯ ಪರಿಶೀಲನೆ ಮಾಡುವುದರಲ್ಲಿ ಸಕ್ರಿಯರಾಗುತ್ತೀರಿ. ನಿಮ್ಮ ಕಾರ್ಯಗಳನ್ನು ಈ ಹಿಂದೆಂದಿಗಿಂತಲೂ ವೇಗವಾಗಿ ಮಾಡಲಿದ್ದೀರಿ. ಈಗಿನ ಪರಿಸ್ಥಿತಿಯಲ್ಲಿ ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣ ಮಾಡಲು ಹೆಚ್ಚು ಹಣ ಖರ್ಚು ಮಾಡಬೇಕಾಗುತ್ತದೆ. ಶುಭದಿನ 02. ವಿಷ್ಣು ಸಹಸ್ರನಾಮ ಓದಿರಿ.

ಈ ವಾರ ಬಹಳ ಸಂತೋಷವಾಗಿ ಇರುತ್ತೀರಿ. ಆದಾಯಕ್ಕೆ ಸಂಬಂಧಿಸಿದ ಮೂಲಗಳಿಂದ ಉತ್ತಮ ಲಾಭ ಪಡೆಯುವ ಅವಕಾಶ ಇದೆ. ಇದರಿಂದ ಹೆಚ್ಚು ಉತ್ಸಾಹಭರಿತರಾಗಿ, ಉಲ್ಲಸಿತರಾಗಿ ಕಾಣಿಸಿಕೊಳ್ಳಲಿದ್ದೀರಿ. ವಿದ್ಯಾರ್ಥಿಗಳಿಗೆ ಯಶಸ್ಸು ಪಡೆಯುವ ಅವಕಾಶಗಳು ದೊರೆಯಲಿವೆ. ಮದುವೆ ವಿಚಾರವನ್ನು ಅಂತಿಮಗೊಳಿಸುವ ಅವಕಾಶ ಇದೆ. ಶುಭದಿನ 04. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.







ವಾರದ ಶುರುವಿನಿಂದಲೇ ಉದ್ಯೋಗ ಕ್ಷೇತ್ರದಲ್ಲಿ ಅದ್ಭುತ ಸಾಧನೆ ಮಾಡುವ ಅವಕಾಶಗಳಿವೆ. ನಿಮ್ಮ ಪಾಲಿಗೆ ದೊರೆಯುವ ಅವಕಾಶಗಳನ್ನು ಬಹಳ ಚೆನ್ನಾಗಿ ಬಳಸಿಕೊಳ್ಳಲಿದ್ದೀರಿ. ವ್ಯಾಪಾರಸ್ಥರು ಸ್ಥಳೀಯವಾಗಿ ವಿಶ್ವಾಸಾರ್ಹತೆಯನ್ನು ಹೆಚ್ಚಿಸಿಕೊಳ್ಳುತ್ತೀರಿ. ವಾರದ ಆರಂಭದಲ್ಲಿ ಆರೋಗ್ಯ ಉತ್ತಮವಾಗಿ ಇರುತ್ತದೆ. ಸಾಮಾಜಿಕವಾಗಿ ಗೌರವ ಮನ್ನಣೆಗಳನ್ನು ಪಡೆಯಲಿದ್ದೀರಿ. ಶುಭದಿನ 05. ಸುಬ್ರಮಣ್ಯ ಜಪ ಮಾಡಿರಿ.

ಸಣ್ಣ ಪ್ರವಾಸ ಮಾಡಬೇಕಾಗಿ ಬರುತ್ತದೆ. ಸಂಸ್ಥೆಯೊಂದರ ಜತೆ ಮಹತ್ತರ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆ ಇದೆ. ಮನೆ ಹಾಗೂ ಕುಟುಂಬದ ಬಗ್ಗೆ ಹೆಚ್ಚು ಯೋಚನೆ ಮಾಡಲಿದ್ದೀರಿ. ಶ್ವಾಸಕೋಶ ಸಮಸ್ಯೆ ಎದುರಾಗಬಹುದು. ವಾರದ ಮಧ್ಯ ಭಾಗದಿಂದ ಹಲವು ಒಳ್ಳೆ ಅವಕಾಶಗಳು ನಿಮ್ಮ ಪಾಲಿಗೆ ದೊರೆಯಲಿವೆ. ಆರೋಗ್ಯ ಉತ್ತಮವಾಗಿ ಇರುತ್ತದೆ. ಶುಭದಿನ 02. ಶ್ರೀ ದುರ್ಗಾ ಆರಾಧನೆ ಮಾಡಿರಿ.

